ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/29/ಗ.ಕೋಶ 2013

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:16.06.2014

ಅಧಿಕೃತ ಜ್ಞಾಪನ

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇ-ಪಂಚಾಯತ್ ಕಾರ್ಯಕ್ರಮಗಳ ಅನುಷ್ಠಾನದ ಬಗ್ಗೆ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳು ನಿರ್ವಹಿಸಬೇಕಾದ ಕರ್ತವ್ಯಗಳ ಬಗ್ಗೆ.

*****

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಭಿವೃದ್ಧಿಪಡಿಸಿರುವ ಇ-ಪಂಚಾಯತ್ (ಪಂಚತಂತ್ರ, ಗಾಂಧಿ ಸಾಕ್ಷಿ ಕಾಯಕ, ಇ-ಸ್ವತ್ತು, ಇ-ಹಾಜರಾತಿ ಮತ್ತು ಪ್ಲಾನ್‌ಪ್ಲಸ್ ಇತ್ಯಾದಿ) ತಂತ್ರಾಂಶಗಳ ಅನುಷ್ಠಾನ ಮತ್ತು ಪ್ರಗತಿ ಬಗ್ಗೆ ಹಾಗೂ ಮೇಲ್ವಿಚಾರಣೆ ಇತ್ಯಾದಿಗಳ ಕುರಿತು ಜಿಲ್ಲೆಗಳಲ್ಲಿ ಇ-ಪಂಚಾಯತ್ ಕಾರ್ಯಕ್ರಮದಡಿ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳನ್ನು ನೇಮಕ ಮಾಡಲಾಗಿರುತ್ತದೆ. ಈ ಸಂಬಂಧ ಕೆಲವು ಜಿಲ್ಲೆಗಳಲ್ಲಿ ನಿರೀಕ್ಷಿತ ರೀತಿಯಲ್ಲಿ ಅನುಷ್ಠಾನಗೊಳಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಕಾಮಗಾರಿ ಅನುಷ್ಠಾನದ ಕಾರ್ಯ ವಿಧಾನಗಳನ್ನು ತಂತ್ರಾಂಶದಲ್ಲಿ ಅಳವಡಿಸಬೇಕಾಗಿದ್ದು, ಸಂಬಂಧಪಟ್ಟ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇ-ಪಂಚಾಯತ್ ತಂತ್ರಾಂಶಗಳಾದ ಪಂಚತಂತ್ರ, ಗಾಂಧಿ ಸಾಕ್ಷಿ ಕಾಯಕ, ಇ-ಸ್ವತ್ತು ಮತ್ತು ಪ್ಲಾನ್‌ಪ್ಲಸ್ ತಂತ್ರಾಂಶಗಳ ಜಿಲ್ಲಾ ಮಟ್ಟದಲ್ಲಿ ಅನುಷ್ಠಾನ ಮಾಡುವ ಜವಾಬ್ದಾರಿಯನ್ನು ಸದರಿಯವರು ಹೊಂದಿರುತ್ತಾರೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಭಿವೃದ್ಧಿಪಡಿಸಿರುವ ಪಂಚತಂತ್ರ ತಂತ್ರಾಂಶಗಳ ಅನುಷ್ಠಾನದ ಬಗ್ಗೆ ಜಿಲ್ಲಾ ಮಟ್ಟದಲ್ಲಿ ಸದರಿ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳು ನಿರ್ವಹಿಸಬೇಕಾದ ಕರ್ತವ್ಯ ಮತ್ತು ಹೊಣೆಗಾರಿಕೆಗಳು ಈ ಕೆಳಕಂಡಂತಿವೆ.

**ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳು (DPM) ನಿರ್ವಹಿಸಬೇಕಾದ ಕರ್ತವ್ಯಗಳು ಮತ್ತು ಹೊಣೆಗಾರಿಕೆಗಳು :**

1. Provide support with respect to PES applications and state-specific applications in the district and Coordinate with State Programmer for operational issues and their resolution
2. Visit Taluk Panchayat and GPs periodically to find out issues in rollout of e-Panchayat and new requirements in PES and State-specific applications and resolve them in consultation with State Technical Consultant.
3. Organize trainings, providing Handholding support in all local bodies under his District and Serve as a Helpdesk for all local bodies in the district.
4. Monitor the commissioning of computers and internet connectivity in local bodies under his district.
5. Any other task related to e-Panchayat assigned from time to time.

ಸದರಿ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳಿಗೆ ಮಾಸಿಕ ಸಂಭಾವನೆ ಬಗ್ಗೆ ಇ-ಪಂಚಾಯತ್ ಯೋಜನೆಯಲ್ಲಿ ಬಿಡುಗಡೆಯಾದ ಅನುದಾನದಲ್ಲಿ ಭರಿಸುವುದು. ಪ್ರಸ್ತುತ ಸದರಿಯವರಿಗೆ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ಪ್ರವರ್ಗ-IIIರಡಿಯ ಸರ್ಕಾರಿ ನೌಕರರಿಗೆ ಪಾವತಿಸಲಾಗುವ ದರಗಳಲ್ಲಿ ಪಾವತಿ ಮಾಡಲು ಅನುಮೋದನೆ ನೀಡಿದೆ.

ಇನ್ನು ಮುಂದೆ ಮಾಹೆಯಾನ ಸಂಭಾವನೆ ಪಾವತಿ ಮಾಡುವ ಸಂದರ್ಭದಲ್ಲಿ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳ ಕಾರ್ಯದಕ್ಷತೆಯನ್ನು ಮತ್ತು ಅವರು ಇ-ಪಂಚಾಯತ್ ತಂತ್ರಾಂಶಗಳಲ್ಲಿ ಸಾಧಿಸಿರುವ ಪ್ರಗತಿಯನ್ನು ಪರಿಶೀಲಿಸಿ ಪ್ರಗತಿ ಬಗ್ಗೆ ಜಿಲ್ಲಾ ನೋಡಲ್ ಅಧಿಕಾರಿಯವರು ಖಚಿತಪಡಿಸಿಕೊಂಡು ಸದರಿಯವರ ಸಂಭಾವನೆ ಪಾವತಿ ಬಗ್ಗೆ ಕ್ರಮಕೈಗೊಳ್ಳಲು ತಿಳಿಸಿದೆ.

(ಶ್ರೀಕೃಷ್ಣ ಬುಗಟ್ಯಾಗೋಳ)
ನಿರ್ದೇಶಕರು (ಇ-ಆಡಳಿತ) ಮತ್ತು
ಸ್ವಉದ್ಯೋಗ ಕಾರ್ಯಕ್ರಮ ಹಾಗೂ
ಪ/ನಿ ಸರ್ಕಾರದ ಉಪಕಾರ್ಯದರ್ಶಿ (ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಅಪ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳಿಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಅಪ ಇಲಾಖೆ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ.
3. ನಿರ್ದೇಶಕರು(ಇ-ಆಡಳಿತ), ಗ್ರಾಅಪ ಇಲಾಖೆ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಅಪ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.